Akashvani: Bangalore
National News In Kannada
22.10.2025 : 13.10hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
22.10.2025 : 13.10hrs
*******

ಮುಖ್ಯಾಂಶಗಳು

1. ರಾಷ್ಟ್ರವ್ಯಾಪಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಗಾಗಿ ಸಿದ್ಧತೆಗಳನ್ನು ಪರಿಶೀಲಿಸಲು ನಾಳೆಯಿಂದ ಎರಡು ದಿನಗಳ ಸಭೆ
2. ಶಬರಿಮಲೆ ಅಯ್ಯಪ್ಪ ಸ್ವಾಮಿ ದರ್ಶನ ಪಡೆದ ರಾಷ್ಟ್ರಪತಿ ದ್ರೌಪದಿ ಮುರ್ಮು
3. ನವದೆಹಲಿಯಲ್ಲಿಂದು ಭಾರತೀಯ ನೌಕಾಪಡೆಯ ಕಮಾಂಡರ್‌ಗಳ ಸಮ್ಮೇಳನ ೨೦೨೫ ರ ಎರಡನೇ ಆವೃತ್ತಿ ಆರಂಭ
4. ದೇಶಾದ್ಯಂತ ಇಂದು ಬಲಿಪಾಡ್ಯಮಿ ಆಚರಣೆ: ಶ್ವೇತಭವನದಲ್ಲಿ ದೀಪಾವಳಿ ಆಚರಿಸಿದ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್
5. ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್: ಇಂದಿನ ಪಂದ್ಯದಲ್ಲಿ ಆಸ್ಟ್ರೇಲಿಯಾ-ಇಂಗ್ಲೆಂಡ್ ಮುಖಾಮುಖಿ

**********

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಗಾಗಿ ಸಿದ್ಧತೆಗಳನ್ನು ಪರಿಶೀಲಿಸಲು ಭಾರತೀಯ ಚುನಾವಣಾ ಆಯೋಗ, ನಾಳೆಯಿಂದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಚುನಾವಣಾ ಅಧಿಕಾರಿಗಳೊಂದಿಗೆ ಎರಡು ದಿನಗಳ ಸಭೆಯನ್ನು ನಡೆಸಲಿದೆ. ಸಭೆಯ ನಂತರ, ಆಯೋಗವು ರಾಷ್ಟ್ರವ್ಯಾಪಿ ಈ ಪ್ರಕ್ರಿಯೆಯನ್ನು ಜಾರಿಗೆ ತರುವ ಬಗ್ಗೆ ನಿರ್ಧಾರ ತೆಗೆದುಕೊಳ್ಳುವ ನಿರೀಕ್ಷೆಯಿದೆ. ನವದೆಹಲಿಯ ದ್ವಾರಕಾದಲ್ಲಿರುವ ಇಂಡಿಯಾ ಇಂಟರ್ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಡೆಮಾಕ್ರಸಿ ಅಂಡ್ ಎಲೆಕ್ಷನ್ ಮ್ಯಾನೇಜ್ಮೆಂಟ್‌ನಲ್ಲಿ ನಡೆಯಲಿರುವ ಸಭೆಯು ಗುರುವಾರ ಬೆಳಗ್ಗೆ ಅಧಿವೇಶನದ ನಂತರ ಮುಕ್ತಾಯಗೊಳ್ಳಲಿದೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್, ಚುನಾವಣಾ ಆಯುಕ್ತರಾದ ಸುಖ್ಬೀರ್ ಸಿಂಗ್ ಸಂಧು ಮತ್ತು ವಿನೀತ್ ಜೋಶಿ, ಉಪ ಚುನಾವಣಾ ಆಯುಕ್ತರು ಹಾಗೂ ಇತರೆ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

**********

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಾಲ್ಕು ದಿನಗಳ ಕೇರಳ ಭೇಟಿಯಲ್ಲಿದ್ದಾರೆ. ಇಂದು ಅವರು ಶಬರಿಮಲೆ ದೇವಸ್ಥಾನಕ್ಕೆ ಭೇಟಿ ನೀಡಿ, ಅಯ್ಯಪ್ಪ ಸ್ವಾಮಿಯ ದರ್ಶನ ಪಡೆದರು. ಇದಕ್ಕೂ ಮುನ್ನ ಅವರಿಗೆ ಪೂರ್ಣಕುಂಭ ಸ್ವಾಗತ ಕೋರಲಾಯಿತು. ವಿ.ವಿ.ಗಿರಿ ಅವರ ನಂತರ ದ್ರೌಪದಿ ಮುರ್ಮು ಅವರು

ಶಬರಿಮಲೆ ದೇಗುಲಕ್ಕೆ ಭೇಟಿ ನೀಡಿದ ಎರಡನೇ ರಾಷ್ಟ್ರಪತಿಯವರಾಗಿದ್ದಾರೆ. ನಾಳೆ ಅವರು, ತಿರುವನಂತಪುರದ ರಾಜಭವನದಲ್ಲಿ ಮಾಜಿ ರಾಷ್ಟ್ರಪತಿ ಕೆ.ಆರ್. ನಾರಾಯಣನ್ ಅವರ ಪ್ರತಿಮೆಯನ್ನು ಅನಾವರಣಗೊಳಿಸಲಿದ್ದು, ನಾರಾಯಣ ಗುರು ಸಮಾಧಿಯ ಶತಮಾನೋತ್ಸವ ಸಮಾರಂಭದಲ್ಲಿಯೂ ಭಾಗವಹಿಸಲಿದ್ದಾರೆ. ಅಲ್ಲದೇ, ರಾಷ್ಟ್ರಪತಿಯವರು, ಪಾಲಾದಲ್ಲಿ ಸೇಂಟ್ ಥಾಮಸ್ ಕಾಲೇಜು ಮತ್ತು ಎರ್ನಾಕುಲಂನಲ್ಲಿ ಸೇಂಟ್ ತೆರೇಸಾ ಕಾಲೇಜಿನಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

**********

ಭಾರತೀಯ ನೌಕಾಪಡೆಯ ದ್ವೈವಾರ್ಷಿಕ ಕಮಾಂಡರ್‌ಗಳ ಸಮ್ಮೇಳನ ೨೦೨೫ ರ ಎರಡನೇ ಆವೃತ್ತಿಯು ಇಂದಿನಿಂದ ನವದೆಹಲಿಯಲ್ಲಿ ಪ್ರಾರಂಭವಾಗಿದೆ. 'ಆಪರೇಷನ್ ಸಿಂಧೂರ್' ಮತ್ತು ನೌಕಾಪಡೆಯ ಹೆಚ್ಚಿನ ಕಾರ್ಯಾಚರಣೆಗಳು ಮತ್ತು ಯುದ್ಧ ಸನ್ನದ್ಧತೆಯ ಹಿನ್ನೆಲೆಯಲ್ಲಿ ಮೂರು ದಿನಗಳ ಸಮ್ಮೇಳನವು ಹೆಚ್ಚಿನ ಮಹತ್ವವನ್ನು ಪಡೆದುಕೊಂಡಿದೆ. ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಾಳೆ ನೌಕಾ ಕಮಾಂಡರ್‌ಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.ಸಮ್ಮೇಳನದ ಸಮಯದಲ್ಲಿ ನೌಕಾಪಡೆಯ ಮುಖ್ಯಸ್ಥರು, ಕಮಾಂಡರ್-ಇನ್-ಚೀಫ್‌ಗಳೊಂದಿಗೆ, ಹಿಂದೂ ಮಹಾಸಾಗರ ಪ್ರದೇಶದ ಒಟ್ಟಾರೆ ಭದ್ರತಾ ಪರಿಸ್ಥಿತಿಗೆ ಸಂಬಂಧಿಸಿದ ಯೋಜನೆಗಳನ್ನು ಪರಿಶೀಲಿಸಲಿದ್ದಾರೆ.

**********

ಕೇಂದ್ರ ಸರ್ಕಾರ ಮತ್ತು ಲಡಾಖ್ ಪ್ರತಿನಿಧಿಗಳು ಇಂದು ನವದೆಹಲಿಯಲ್ಲಿ ಮಾತುಕತೆಗಳನ್ನು ಪುನರಾರಂಭಿಸಲಿದ್ದಾರೆ. ಸೆಪ್ಟೆಂಬರ್ ೨೪ ರಂದು ಲೇಹ್‌ನಲ್ಲಿ ನಡೆದ ಹಿಂಸಾಚಾರದ ನಂತರ ಇದು ಮೊದಲ ಮಾತುಕತೆಯಾಗಿದೆ. ಇದಕ್ಕೂ ಮೊದಲು, ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಅವರ ಅಧ್ಯಕ್ಷತೆಯಲ್ಲಿ ರಚಿಸಲಾದ ಉನ್ನತ ಅಧಿಕಾರ ಸಮಿತಿಯ ಮಾತುಕತೆಯನ್ನು ಸೆಪ್ಟೆಂಬರ್ ೨೪ ರ ಕಾರ್ಯಕ್ರಮದ ಕಾರಣದಿಂದಾಗಿ ರದ್ದುಗೊಳಿಸಲಾಯಿತು. ಗೃಹ ಸಚಿವಾಲಯದ ಆಹ್ವಾನದ ಮೇರೆಗೆ, ಮಾಜಿ ಸಂಸದ ಮತ್ತು ಲೇಹ್‌ನ ಅಪೆಕ್ಸ್ ಅಧ್ಯಕ್ಷ ಥುಪ್ಸ್ಟಾನ್ ಚೆವಾಂಗ್ ನೇತೃತ್ವದ ಲಡಾಖ್‌ನ ೧೦ ಪ್ರಮುಖ ಪ್ರತಿನಿಧಿಗಳನ್ನು ಒಳಗೊಂಡ ನಿಯೋಗ, ಗೃಹ ಸಚಿವಾಲಯದ ಹಿರಿಯ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಪ್ರತಿನಿಧಿಸಲಿದೆ.

**********

ದೇಶದಲ್ಲೆಡೆ ಇಂದು ಬಲಿಪಾಡ್ಯಮಿ ಆಚರಿಸಲಾಗುತ್ತಿದೆ. ಅಲ್ಲದೇ ಉತ್ತರ ಭಾರತದ ವಿವಿಧ ಭಾಗಗಳಲ್ಲಿ ಇಂದು ಗೋವರ್ಧನ ಪೂಜೆಯನ್ನು ಆಚರಿಸಲಾಗುತ್ತಿದೆ. ಉತ್ತರ ಪ್ರದೇಶದಲ್ಲಿ, ವಿಶೇಷವಾಗಿ ಮಥುರಾ ಮತ್ತು ವೃಂದಾವನದಲ್ಲಿ ಗೋವರ್ಧನ ಪೂಜೆಯನ್ನು ಭಕ್ತಿಯಿಂದ ಆಚರಿಸಲಾಗುತ್ತಿದೆ. ಈ ಸ್ಥಳಗಳಲ್ಲಿ ಶ್ರೀಕೃಷ್ಣನ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದಾರೆ.

**********

ದೀಪಾವಳಿ ಶುಭಾಶಯ ಕೋರಿದ್ದಕ್ಕಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ದೂರವಾಣಿ ಕರೆ ಮೂಲಕ ಇಂದು ಪ್ರಧಾನಿ ನರೇಂದ್ರ ಮೋದಿ ಧನ್ಯವಾದ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಭಾರತ ಮತ್ತು ಅಮೆರಿಕ ಪಾಲುದಾರಿಕೆಯ ನಿರಂತರ ಶಕ್ತಿಯನ್ನು ಒತ್ತಿ ಹೇಳಿದರು. ಈ ಬೆಳಕಿನ ಹಬ್ಬದಂದು, ಎರಡು ಮಹಾನ್ ಪ್ರಜಾಪ್ರಭುತ್ವಗಳು ಜಗತ್ತನ್ನು ಭರವಸೆಯಿಂದ ಬೆಳಗಿಸುವುದನ್ನು ಮುಂದುವರಿಸಲಿ ಮತ್ತು ಎಲ್ಲಾ ರೀತಿಯ ಭಯೋತ್ಪಾದನೆಯ ವಿರುದ್ಧ ಒಗ್ಗಟ್ಟಿನಿಂದ ನಿಲ್ಲಲಿ ಎಂದು ಪ್ರಧಾನಿ ಮೋದಿ ಆಶಿಸಿದರು. ಇನ್ನೊಂದೆಡೆ, ಶ್ವೇತಭವನದಲ್ಲಿ ನಡೆದ ದೀಪಾವಳಿ ಆಚರಣೆಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಅವರು ಭಾರತದ ಜನರು ಮತ್ತು ಭಾರತೀಯ-ಅಮೆರಿಕನ್ನರಿಗೆ ಶುಭಾಶಯಗಳನ್ನು ಕೋರಿದರು.ತಮ್ಮ ಭಾಷಣದಲ್ಲಿ ಅಮೆರಿಕ ಅಧ್ಯಕ್ಷರು, ಪ್ರಧಾನಿ ನರೇಂದ್ರ ಮೋದಿಯವರನ್ನು ಶ್ಲಾಘಿಸಿದರು. ಪ್ರಧಾನಿ ಮೋದಿ ಒಬ್ಬ ಮಹಾನ್ ವ್ಯಕ್ತಿ ಮತ್ತು ಉತ್ತಮ ಸ್ನೇಹಿತ. ವ್ಯಾಪಾರ ಮತ್ತು ಪ್ರಾದೇಶಿಕ ಶಾಂತಿಯಲ್ಲಿ ಅಮೆರಿಕ-ಭಾರತ ಉತ್ತಮ ಸಂಬಂಧಗಳನ್ನು ಹೊಂದಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದರು.

***ಧ್ವನಿ****ಡೊನಾಲ್ಡ್ ಟ್ರಂಪ್

ನಂತರ, ಶ್ವೇತಭವನದಲ್ಲಿ ದೀಪಗಳನ್ನು ಬೆಳಗಿಸುವ ಮೂಲಕ ದೀಪಾವಳಿ ಹಬ್ಬಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಟ್ರಂಪ್ ಆಡಳಿತದ ಹಲವಾರು ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**********

ಉಕ್ರೇನ್‌ನಾದ್ಯಂತ ಇಂಧನ ಸೌಲಭ್ಯಗಳ ಮೇಲೆ ರಷ್ಯಾ ದಾಳಿ ಮಾಡಿದ್ದು, ಘಟನೆಯಲ್ಲಿ ಇಬ್ಬರು ಪ್ರಾಣ ಕಳೆದುಕೊಂಡಿದ್ದಾರೆ. ಉಕ್ರೇನ್ ಅಧಿಕಾರಿಗಳ ಪ್ರಕಾರ, ಮೂಲಸೌಕರ್ಯ ಮತ್ತು ವಸತಿ ಪ್ರದೇಶಗಳನ್ನು ಗುರಿಯಾಗಿಸಿಕೊಂಡು, ಕ್ಷಿಪಣಿಗಳು ಮತ್ತು ಡ್ರೋನ್‌ಗಳಿಂದ ದಾಳಿಗಳು ನಡೆದಿವೆ. ಪ್ರಸ್ತಾವಿತ ಕದನ ವಿರಾಮವನ್ನು ರಷ್ಯಾ ತಿರಸ್ಕರಿಸಿದ ನಂತರ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಡುವಿನ ಯೋಜಿತ ಶೃಂಗಸಭೆಯನ್ನು ಅಮೆರಿಕ ಮುಂದೂಡಲು ಈ ದಾಳಿಗಳು ಕಾರಣವಾಗಿವೆ.ಈ ದಾಳಿಗಳ ಬಗ್ಗೆ ರಷ್ಯಾ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಏತನ್ಮಧ್ಯೆ, ಬ್ರಿಟನ್ ಸರಬರಾಜು ಮಾಡಿರುವ ಸ್ಟಾರ್ಮ್ ಶ್ಯಾಡೋ ಕ್ಷಿಪಣಿಗಳನ್ನು ಬಳಸಿಕೊಂಡು ರಷ್ಯಾದ ರಾಸಾಯನಿಕ ಸ್ಥಾವರವನ್ನು ನಿನ್ನೆ ಹೊಡೆದುರುಳಿಸಲಾಯಿತು ಎಂದು ಉಕ್ರೇನ್ ಪಡೆಗಳು ತಿಳಿಸಿವೆ.

**********

ಇಂದೋರ್‌ನ ಹೋಳ್ಕರ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಸಿಸಿ ಮಹಿಳಾ ವಿಶ್ವಕಪ್ ಕ್ರಿಕೆಟ್ ಪಂದ್ಯದಲ್ಲಿ ಆಸ್ಟ್ರೇಲಿಯಾ ಮತ್ತು ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ

ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ಕೊಲಂಬೊದಲ್ಲಿ ನಿನ್ನೆ ರಾತ್ರಿ ನಡೆದ ರೌಂಡ್ ರಾಬಿನ್ ಲೀಗ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ತಂಡ, ಪಾಕಿಸ್ತಾನವನ್ನು ೧೫೦ ರನ್‌ಗಳಿಂದ ಪರಾಭವಗೊಳಿಸಿತು.

**********

ಬಹ್ರೇನ್‌ನ ಮನಾಮದಲ್ಲಿ ನಡೆದ ಏಷ್ಯನ್ ಯೂತ್ ಗೇಮ್ಸ್‌ನ ಕಬಡ್ಡಿಯಲ್ಲಿ ಭಾರತೀಯ ಬಾಲಕ ಮತ್ತು ಬಾಲಕಿಯರ ತಂಡಗಳು ಭರ್ಜರಿ ಗೆಲುವು ಸಾಧಿಸಿವೆ. ಭಾರತೀಯ ಬಾಲಕರ ತಂಡ, ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನವನ್ನು ೮೧-೨೬ ಅಂಕಗಳಿಂದ ಸೋಲಿಸಿದರೆ, ಬಾಲಕಿಯರ ತಂಡ ಇರಾನ್ ತಂಡನ್ನು ೫೯-೨೬ ಅಂಕಗಳಿಂದ ಪರಾಭವಗೊಳಿಸಿತು.

**********

ಕೇರಳ, ಮಾಹೆ, ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಮುನ್ಸೂಚನೆ ನೀಡಿರುವ ಭಾರತೀಯ ಹವಾಮಾನ ಇಲಾಖೆ, ಈ ಪ್ರದೇಶಗಳಲ್ಲಿ ರೆಡ್ ಅಲರ್ಟ್ ಘೋಷಿಸಿದೆ. ಆಂಧ್ರಪ್ರದೇಶ, ಕರ್ನಾಟಕದ ಕರಾವಳಿ ಮತ್ತು ದಕ್ಷಿಣ ಒಳನಾಡಿನ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರೀ ಮಳೆಯಾಗುವ ನಿರೀಕ್ಷೆ ಇದೆ. ಅಲ್ಲದೇ, ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು ಹಾಗೂ ಲಕ್ಷದ್ವೀಪಗಳ ಪ್ರತ್ಯೇಕ ಸ್ಥಳಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಇದೇ ವೇಳೆ ತಮಿಳುನಾಡಿನಲ್ಲಿ, ಭಾರೀ ಮಳೆಯಿಂದಾಗಿ ಚೆನ್ನೈ, ಚೆಂಗಲ್ಪಟ್ಟು ಮತ್ತು ಕಾಂಚಿಪುರಂನಲ್ಲಿನ ಶಾಲೆಗಳಿಗೆ ರಜೆ ಘೋಷಿಸಲಾಗಿದೆ.

******END****